## 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು

## ಸಿ.ಸಿಃ 404/2015

| | | | |
|---|---|---|---|
| ಸಾಕ್ಷಿದಾರರ ಹೆಸರು | | ಶಿವಣ್ಣ ಬಿ.ವೈ | ಪ್ರಾಸಾಃ 4 |
| ತಂದೆಯ ಹೆಸರು | | ಬೋಗೇಗೌಡ | ಚಾಸಾಃ 7 |
| ವಯಸ್ಸು | | 56 ವರ್ಷ | |
| ಕೆಲಸ | | ಪಿ.ಎಸ್.ಐ, ನಂಜನಗೂಡು ಪಟ್ಟಣ ಪೊಲೀಸ್ ಠಾಣೆ | ಸಾ ಪ್ರ ಬೋ |
| ವಾಸ | | ಮೈಸೂರು | ದಿಃ 10.01.2024 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು ಬದನವಾಳು ಪೋಲಿಸ್ ಠಾಣೆಯಲ್ಲಿ ಸೆಪ್ಟೆಂಬರ್, 2013 ರಿಂದ ಡಿಸೆಂಬರ್, 2016 ರವರೆಗೂ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 20.04.2014 ರಂದು ನಮ್ಮ ಠಾಣೆಯ ಪಿ.ಎಸ್.ಐ ರವರು ನಂಜನಗೂಡು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿ ದಾಖಲಾಗಿದ್ದ ಚಾಸಾ-1 ರವರ ಹೇಳಿಕೆಯನ್ನು ಪಡೆದು ಕೊಂಡು ಬರುವಂತೆ ನನ್ನನ್ನು ನೇಮಕ ಮಾಡಿದ್ದರ ಮೇರೆಗೆ ನಾನು ಸದರಿ ಆಸ್ಪತ್ರೆಗೆ ಭೇಟಿ ನೀಡಿ ಚಾಸಾ-1 ರವರ ಹೇಳಿಕೆ ಯನ್ನು ನಂಜನಗೂಡು ಸರ್ಕಾರಿ ಆಸ್ಪತ್ರೆಯ ವೈದ್ಯರ ಸಮಕ್ಷಮ ಮಧ್ಯಾಹ್ನ 1.00 ರಿಂದ 2.00 ರವರೆಗೆ ಗಾಯಾಳುವಿನ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ಅದೇ ದಿನ ಮಧ್ಯಾಹ್ನ 3.15 ಗಂಟೆಗೆ ಠಾಣೆಗೆ ಹೋಗಿ ಪಡೆದ ಚಾಸಾ-1 ರವರ ಹೇಳಿಕೆಯನ್ನು ಚಾಸಾ-8 ರವರ ಮುಂದೆ ಹಾಜರುಪಡಿಸಿರುತ್ತೇನೆ.

ಈಗ ನನಗೆ ತೋರಿಸಿದ ದಾಖಲೆಯು ನಾನು ದಾಖಲಿಸಿಕೊಂಡ ಚಾಸಾ-1 ರವರ ಹೇಳಿಕೆಯಾಗಿದ್ದು ಅದರಲ್ಲಿ ನನ್ನ ರುಜು ಇರುತ್ತದೆ. ಹೇಳಿಕೆ ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ರುಜುವನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎ.ಎಸ್. ಆರ್. ವಕೀಲರಿಂದಃ**

ಗಾಯಾಳುವಿನ ಹೇಳಿಕೆಯನ್ನು ಪಡೆಯುವಾಗ ಗಾಯಾಳು ಮತ್ತು ನಾನು ಇಬ್ಬರೇ ಇದ್ದೆವು ಬೇರೆ ಯಾರು ಇರಲಿಲ್ಲ. ನಾನು ನಿಪಿ-1 ಅನ್ನು ಪ್ರಕರಣಕ್ಕೆ ಪೂರಕವಾಗುವಂತೆ ಠಾಣೆಯಲ್ಲಿಯೇ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಂತೆ ಗಾಯಾಳು ನನ್ನ ಮುಂದೆ ಯಾವುದೇ ಹೇಳಿಕೆ

ನೀಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಓ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**